ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012. ದೂರವಾಣಿ: 080–23460460 (5 ಲೈನ್ಸ್),
ಇ–ಮೇಲ್: keauthority-ka@nic.in ವೆಬ್‌ಸೈಟ್: http://kea.kar.nic.in

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್–04/2024 (ಕೆಕೆ) ದಿನಾಂಕ: 21–02–2024
ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್–04/2024 (ಆರ್‌ಪಿಸಿ) ದಿನಾಂಕ: 21–02–2024

## ಅಧಿಸೂಚನೆ

**ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ**

ಕಂದಾಯ ಇಲಾಖೆ, ಕರ್ನಾಟಕ ಸರ್ಕಾರದ ಪತ್ರ ಸಂಖ್ಯೆ: ಕಂಇ 240 ಬಿಎಸ್‌ಸಿ 2022 ಬೆಂಗಳೂರು ದಿನಾಂಕ 03–02–2024 ಮತ್ತು 07–02–2024 ರ ಅನ್ವಯ ವಿವಿಧ ಜಿಲ್ಲೆಗಳಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ (ಸ್ಥಳೀಯ) ವೃಂದದ ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇರ ನೇಮಕಾತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 (ತಿದ್ದುಪಡಿಗಳು) ಅನ್ವಯ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುವುದು. ಅಭ್ಯರ್ಥಿಗಳು ಗ್ರಾಮ ಆಡಳಿತ ಅಧಿಕಾರಿ ಹುದ್ದೆಯ ನೇಮಕಾತಿ ಬಯಸಿ ಯಾವುದಾದರೂ ಒಂದು ಜಿಲ್ಲೆಗೆ ಮಾತ್ರ ಅರ್ಜಿಯನ್ನು ಸಲ್ಲಿಸಲು ಅರ್ಹತೆಯನ್ನು ಪಡೆಯುತ್ತಾರೆ. ಅಭ್ಯರ್ಥಿಗಳು ಪ್ರಾಧಿಕಾರವು ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗಬೇಕು.

1) ಒಟ್ಟು ಹುದ್ದೆಗಳು: **1000**
2) ಶೈಕ್ಷಣಿಕ ವಿದ್ಯಾರ್ಹತೆ : **ಎರಡನೇ ಪಿಯುಸಿ ಅಥವಾ ತತ್ಸಮಾನತೆ**
3) ವೇತನ ಶ್ರೇಣಿ: **21400–42000**
4) ಪ್ರಾಧಿಕಾರದ ವೆಬ್‌ಸೈಟ್: **http://kea.kar.nic.in** ನಲ್ಲಿ ತೋರಿಸಿರುವ **"Village Administrative Officer Recruitment- 2024"** ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಪೆನ್ ಮತ್ತು ಪೇಪರ್ ಉಪಯೋಗಿಸಿ ಅರ್ಜಿಯನ್ನು ಸಲ್ಲಿಸುವ ವಿಧಾನ ಇರುವುದಿಲ್ಲ.

| | | |
|---|---|---|
| i | ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | **04–03–2024 ರ ಬೆಳಿಗ್ಗೆ 11.00 ರಿಂದ** |
| ii | ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | **03–04–2024 ರ ರಾತ್ರಿ 11.59 ರವರೆಗೆ** |
| iii | ಆನ್‌ಲೈನ್ ಮುಖಾಂತರ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **06–04–2024** |

5) ಅಭ್ಯರ್ಥಿಗಳ ಅರ್ಹತೆ ವಿವರ, ವಯೋಮಿತಿ, ಸ್ಪರ್ಧಾತ್ಮಕ ಪರೀಕ್ಷೆ, ಆಯ್ಕೆ ಪ್ರಕ್ರಿಯೆ ಮತ್ತು ನೇಮಕಾತಿಯ ವಿವರ ಹಾಗೂ ಪ್ರವರ್ಗವಾರು ಮತ್ತು ಜಿಲ್ಲಾವಾರು ಹುದ್ದೆಗಳ ವಿವರಗಳು ಹಾಗೂ ಇನ್ನಿತರ ಮಾಹಿತಿಗಾಗಿ ಕೆಇಎ ವೆಬ್‌ಸೈಟ್: **http://kea.kar.nic.in** ಗೆ ಭೇಟಿ ನೀಡಲು ಕೋರಿದೆ.

**ಸೂಚನೆ:**

I) ಕೇವಲ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು, ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವುದು ಮತ್ತು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅರ್ಹತೆ ಪಡೆಯುವುದು ಅಭ್ಯರ್ಥಿಗಳಿಗೆ **ಗ್ರಾಮ ಆಡಳಿತ ಅಧಿಕಾರಿ** ನೇಮಕಾತಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ, ನೇಮಕಾತಿಯು ಸರ್ಕಾರ / ಸಕ್ಷಮ ಪ್ರಾಧಿಕಾರ / ನೇಮಕಾತಿ ಪ್ರಾಧಿಕಾರವು ನಿಗದಿಪಡಿಸಬಹುದಾದ ಅರ್ಹತಾ ಮಾನದಂಡಗಳಿಗೆ ಒಳಪಟ್ಟಿರುತ್ತದೆ.

II) ಮೇಲಿನ ಯಾವುದೇ ನಿಯಮಗಳು / ಕಾರ್ಯವಿಧಾನಗಳಿಗೆ ಸಂಬಂಧಿಸಿದಂತೆ ವ್ಯತ್ಯಾಸ ಅಥವಾ ಅಸ್ಪಷ್ಟತೆ ಕಂಡು ಬಂದಲ್ಲಿ, ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 (ತಿದ್ದುಪಡಿಗಳು), ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 (ತಿದ್ದುಪಡಿಗಳು) ಮತ್ತು **ಗ್ರಾಮ ಆಡಳಿತ ಅಧಿಕಾರಿ** ನೇಮಕಾತಿಗೆ ಸಂಬಂಧಿಸಿದಂತೆ ಕರ್ನಾಟಕ ಸಾಮಾನ್ಯ ನಿಯಮಗಳು (ರೆವೆನ್ಯೂ ಸಬಾರ್ಡಿನೇಟ್ ಬ್ರ್ಯಾಂಚ್) (C & R) (ತಿದ್ದುಪಡಿ) ನಿಯಮಬಗಳು 2024 ರಲ್ಲಿರುವಂತೆ ಅನ್ವಯಿಸುತ್ತದೆ.

**ಸಹಿ/–**
**(ಎಸ್. ರಮ್ಯ, ಭಾ.ಆ.ಸೇ)**
**ಕಾರ್ಯನಿರ್ವಾಹಕ ನಿರ್ದೇಶಕರು**

ವಾಸಾಸಂಇ/ವಾ.ಪ್ರ/3769/2023–24

Size: 12x17cm